# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **692** |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಪಿ.ನಂಜುಂಡಿ ವಿಶ್ವಕರ್ಮ(ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17.12.2021 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಿಶ್ವಕರ್ಮ ಸಮುದಾಯದ ಪಂಚ ಕಸುಬುಗಾರಿಕೆಗೆ ಸರ್ಕಾರ ನೀಡಿರುವ ಸವಲತ್ತುಗಳೇನು; | ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ವತಿಯಿಂದ ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ವಿಶ್ವಕರ್ಮ ಸಮುದಾಯದ ಸಾಂಪ್ರದಾಯಿಕ ವೃತ್ತಿಗಳಾದ ಕಮ್ಮಾರಿಕೆ ಅಕ್ಕಸಾಲಿ ಹಾಗೂ ಬಡಗಿ ವೃತ್ತಿಗಳಲ್ಲಿ ತೊಡಗಿರುವ ಕುಶಲಕರ್ಮಿಗಳಿಗೆ ರೂ.1,50,000/-ಗಳಂತೆ ಘಟಕ ವೆಚ್ಚ ಸಾಲ ಮಂಜೂರು ಮಾಡಲಾಗುವುದು. ಇದರಲ್ಲಿ ಶೇಕಡ 20ರಷ್ಟು ಗರಿಷ್ಠ ರೂ.25,000/-ಗಳ ಸಹಾಯಧನ ಮಂಜೂರು ಮಾಡಲಾಗುವುದು. ಶೇಕಡ 80ರಷ್ಟು ಸಾಲದ ಮೊತ್ತಕ್ಕೆ ಶೇಕಡ 4 ಬಡ್ಡಿದರ ವಿಧಿಸಲಾಗುವುದು ಹಾಗೂ ಭದ್ರತೆಗಾಗಿ ಆಸ್ತಿಯನ್ನು ಅಡಮಾನ ಮಾಡಿಸಿಕೊಂಡು ರೂ.1,50,000/-ಗಳನ್ನು ಮಂಜೂರು ಮಾಡಲಾಗುವುದು. |
| ಆ) | ಚಿನ್ನದ ಕೆಲಸ, ಬೆಳ್ಳಿಯ ಕೆಲಸ, ಶಿಲ್ಪದ ಕೆಲಸ, ಮರದ ಕೆಲಸ, ಕಟ್ಟಡದ ಕೆಲಸ ಮಾಡುವ ಬಡವರಿಗೆ ವಿಶೇಷ ಸೌಲಭ್ಯ ಒದಗಿಸುವುದರ ಬಗ್ಗೆ ಸರ್ಕಾರದ ನಿಲುವೇನು; | ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಲ್ಲಿ ಈ ಕೆಳಕಂಡ ಯೋಜನೆಗಳಡಿ ನೆರವು ನೀಡಲಾಗುತ್ತಿದೆ.<br>1. **ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು ಯೋಜನೆ**: ಸದರಿ ಯೋಜನೆಯಡಿ ವಿಶ್ವಕರ್ಮ ಸಮುದಾಯದ ಜನರು ಕೈಗೊಳ್ಳುವ ಸಾಂಪ್ರದಾಯಿಕ ವೃತ್ತಿಗಳಾದ ಚಿನ್ನ-ಬೆಳ್ಳಿ ಕೆಲಸ, ಶಿಲ್ಪಕಲೆ, ಮರಗೆಲಸ, ಲೋಹ, ಎರಕದ ಕೆಲಸ ನಿರ್ವಹಿಸುವವರಿಗೆ ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಗರಿಷ್ಠ ರೂ.80,000/-ಗಳ ವರೆಗೆ ಸಾಲ ಹಾಗೂ ಗರಿಷ್ಠ ರೂ.20,000/-ಗಳ ಸಹಾಯಧನ ಮಂಜೂರು ಮಾಡಲಾಗುವುದು.<br>2. **ಸ್ವಯಂ ಉದ್ಯೋಗ ನೇರ ಸಾಲ ಯೋಜನೆ**: ಈ ಯೋಜನೆಯಡಿ ವಿಶ್ವಕರ್ಮ ಮತ್ತು ಅದರ ಉಪಜಾತಿಗಳಿಗೆ ಸೇರಿದ ಜನರು ಸ್ವಯಂ ಉದ್ಯೋಗ ಕೈಗೊಳ್ಳಲು ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ ರೂ.40,000/-ಗಳ ಸಾಲ ಮತ್ತು ಶೇ.30ರಷ್ಟು ಅಥವಾ ಗರಿಷ್ಠ ರೂ.10,000/-ಗಳ ಸಹಾಯಧನ ನೀಡಲಾಗುವುದು. |

| | | |
|---|---|---|
| ಇ) | 2020-21ನೇ ಕೋವಿಡ್ ಸಾಂಕ್ರಾಮಿಕ ದಿನಗಳಲ್ಲಿ ಸಂಕಷ್ಟ ವಿಶ್ವಕರ್ಮ ಸಮುದಾಯದ ಜನರಿಗೆ ಯಾವ ಪರಿಹಾರವನ್ನು ಒದಗಿಸಲಾಗಿದೆ? (ಸಂಪೂರ್ಣ ವಿವರ ನೀಡುವುದು) | 2020-21 ನೇ ಸಾಲಿನ ಕೋವಿಡ್-19 ಸಂತ್ರಸ್ಥರಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿಶ್ವಕರ್ಮ ಸಮುದಾಯದ ಜನರಿಗೆ ಯಾವುದೇ ಪ್ರತ್ಯೇಕ ಪ್ಯಾಕೇಜ್ ನ್ನು ಘೋಷಣೆ ಮಾಡಿರುವುದಿಲ್ಲ. |

**ಸಂಖ್ಯೆ: ಹಿಂವಕ 748 ಬಿಎಂಎಸ್ 2021**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು